# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 07.11.2020 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಶ್ರೀ ಯಶವಂತ್ ಸಿ. ವಿ. | ಸಹಾಯಕ ಅಭಿಯಂತರರು, | ಸದಸ್ಯ ಕಾರ್ಯದರ್ಶಿ | ಹಾಜರಿದ್ದರು |
| 3 | ಶ್ರೀ ಸೋಮಶೇಖರಯ್ಯ | ಉಪನ್ಯಾಸಕರು | ಕೋವಿಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 5 | ಡಾ|| ಸುನೀತಾ | ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 6 | ಡಾ|| ಹರ್ಷಿತ್ ಬಿ. ಎಂ. | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
|  | ಡಾ|| ಶ್ರೀನಿವಾಸ್ | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 7 | ಶ್ರೀಮತಿ ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 8 | ಶ್ರೀ ರೇಣುಕಾ | ಕಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 9 | ಶ್ರೀ ಗಂಗಾಧರ್ | ಕಂದಾಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 10 | ಶ್ರೀ ಆರ್. ರಾಜಶೇಖರ್ | ಕಿರಿಯ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |
| 11 | ಶ್ರೀ ರಂಗರಾಜು | ಕಿರಿಯ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |

| | | | | |
|---|---|---|---|---|
| 12 | ಶ್ರೀ ಚನ್ನೇಶಪ್ಪ | ಸಹಾಯಕ / ಕಿರಿಯ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ. | ಸದಸ್ಯರು | ಹಾಜರಿದ್ದರು |
| 13 | ಶ್ರೀ ಪುನೀತ್ | ವಾರ್ಡ್ ಮಾರ್ಷಲ್ | ಸದಸ್ಯರು | ಹಾಜರಿದ್ದರು |
| 14 | ಬೀರಪ್ಪ ಕಿವೊಡಿ | ಸೆಕ್ಟರ್ ಆಫೀಸರ್, ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 15 | ಮಾದೇಶ | ಹೋಂ ಕ್ವಾರಂಟೈನ್ ಟೀಂ | ಸ್ವಯಂ ಸೇವಕರು | ಹಾಜರಿದ್ದರು |
| 16 | ಮಹದೇವ್ ಪ್ರಸಾದ್ | ಹೋಂ ಕ್ವಾರಂಟೈನ್ ಟೀಂ | ಸ್ವಯಂ ಸೇವಕರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**1) ಬಿಡಬ್ಲ್ಯೂಎಸ್ಎಸ್ಬಿ:-**

ಬಿ ಕೆ ನಗರ 1ನೇ ಮುಖ್ಯರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದು, ಇದರಿಂದಾಗಿ ಕೆಲವೊಂದು ಮನೆಗಳಿಗೆ ಒಳಚರಂಡಿ ಪೈಪ್‌ಲೈನ್ ಸಂಪರ್ಕವನ್ನು ನೀಡಿರುವುದಿಲ್ಲ ಎಂದು ಬಿಡಬ್ಲ್ಯೂಎಸ್ಎಸ್ಬಿ ಅಭಿಯಂತರರು ಪ್ರಸ್ತಾಪಿಸಿದರು. ಅದರಂತೆ, ನೋಡಲ್ ಅಧಿಕಾರಿಗಳು ಸ್ಥಳ ಪರಿಶೀಲನೆಯನ್ನು ಮಾಡುವುದಾಗಿ ಸಭೆಗೆ ತಿಳಿಸಿದರು.

**2) ಬೆಸ್ಕಾಂ:-**

ವಿದ್ಯುತ್ ಲೈನ್‌ಗಳಿಗೆ ತಡೆಯಾಗಿರುವ ಮರದ ಕೊಂಬೆಗಳನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ತೆರವುಗೊಳಿಸಿದ ಮರದ ಕೊಂಬೆಗಳನ್ನು ಹತ್ತಿರದಲ್ಲಿ ಗುರುತಿಸಲ್ಪಟ್ಟ ಡಂಪಿಂಗ್ ಯಾರ್ಡ್‌ಗಳಲ್ಲಿ ವಿಲೇವಾರಿ ಮಾಡಲು ಸೂಚಿಸಲಾಯಿತು.

**3) ಆರೋಗ್ಯ ಇಲಾಖೆ:-**

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ಪ್ರಾಥಮಿಕ ಆರೋಗ್ಯ ಕೇಂದ್ರದ ಎದುರು ಹೆಚ್ಚು ಆಟೋಗಳು ಜಮಾವಣೆಯಾಗುತ್ತಿರುವ ದೂರಿನ ಬಗ್ಗೆ, ಕ್ರಮ ಕೈಗೊಂಡು, ವಾರ್ಡ್ ಮಾರ್ಷಲ್ ಹಾಗೂ ಆರಕ್ಷಕರ ಸಹಾಯದಿಂದ ಭಾಗಶ: ಸಮಸ್ಯೆಯನ್ನು ಪರಿಹರಿಸಲಾಗಿರುತ್ತದೆ.

ಕೋವಿಡ್ ಮಾತ್ರೆಗಳ ಕೊರತೆಯ ಸಮಸ್ಯೆಯ ಬಗ್ಗೆ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿದ್ದು, ಅದರಂತೆ, ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶಿಸಿ, ಸಮಸ್ಯೆಯನ್ನು ಬಗೆಹರಿಸಲಾಗಿರುತ್ತದೆ.

ಕೋವಿಡ್ ನೋಡಲ್ ಅಧಿಕಾರಿಗಳಾದ ಶ್ರೀ ಸೋಮಶೇಖರಯ್ಯರವರು ಸಭೆಯಲ್ಲಿ ಮಾತನಾಡಿ, ರೈಲ್ವೆ ನಿಲ್ದಾಣದಲ್ಲಿ ಈ ಮೊದಲು ಆಗಮಿಸುವ ಹಾಗೂ ನಿರ್ಗಮಿಸುವ ಪ್ರಯಾಣಿಕರಿಗೆ ಕೋವಿಡ್ ಪರೀಕ್ಷೆಯನ್ನು ಮಾಡಲಾಗುತ್ತಿದ್ದು, ನಿರ್ಗಮಿಸುವ ಪ್ರಯಾಣಿಕರಿಗೆ ಕೋವಿಡ್ ಪರೀಕ್ಷೆ ಮಾಡುತ್ತಿರುವುದರಿಂದ ಯಶವಂತಪುರಕ್ಕೆ ದಾಖಲಾಗುತ್ತಿರುವ ಕೋವಿಡ್ ಪ್ರಕರಣಗಳು ವಿವಿಧ ರಾಜ್ಯಗಳ ನಿವಾಸಿಯಾಗಿರುತ್ತಾರೆ. ಆದುದರಿಂದ ಕೇವಲ ಆಗಮಿಸುವ ಪ್ರಯಾಣಿಕರಿಗೆ ಮಾತ್ರ ಕೋವಿಡ್ ಪರೀಕ್ಷೆ ಮಾಡಲು ಸೂಚಿಸಿದರು. ಅದರಂತೆ, ಡಾ|| ಸುನೀತಾರವರು ಮಾತನಾಡಿ, ಹೊರ ರಾಜ್ಯದವರ ಕೋವಿಡ್ ದಾಖಲೆಯು ಆ ರಾಜ್ಯಗಳಿಗೆ ಮಿಂಚಂಚೆ ಮೂಲಕ ರವಾನಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ದಿನಾಂಕ:14.11.2020 ರಂದು "ವಿಶ್ವ ಮಧುಮೇಹ ದಿನ"ವಾಗಿದ್ದು, ಅಂದು ಆರೋಗ್ಯ ಶಿಬಿರನ್ನು ವಾರ್ಡ್‌ನ ವಿವಿಧ ಮೂರು ಸ್ಥಳಗಳಲ್ಲಿ ಹಮ್ಮಿಕೊಳ್ಳಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಅದರಂತೆ, ವಾರ್ಡ್ ಸಹಾಯಕ ಅಭಿಯಂತರರಿಗೆ ಆರೋಗ್ಯ ಶಿಬಿರಕ್ಕೆ ಅವಶ್ಯಕ ವೈದ್ಯಕೀಯ ಪರಿಕರಗಳನ್ನು ಒದಗಿಸಲು ಸೂಚಿಸಲಾಯಿತು.

ಅರೋಗ್ಯ ಸಿಬ್ಬಂದಿಗೆ ಕಳೆದ ಮೂರು ಮಾಹೆಗಳಿಂದ ಯಾವುದೇ ವೇತನ ಪಾವತಿಸಿರುವುದಿಲ್ಲ. ಸಹಾಯಕ ನಿಯಂತ್ರಕರು (ಹಣಕಾಸು) ರವರಿಗೆ ಸಂಬಂಧಪಟ್ಟ ನೌಕರರ ಬ್ಯಾಂಕಿನ ವಿವರ ಹಾಗೂ ಹಾಜರಾತಿ ವಿವರ ಸಲ್ಲಿಸಿದ್ದರೂ ಸಹ ಯಾವುದೇ ಕ್ರಮವನ್ನು ಕೈಗೊಂಡಿರುವುದಿಲ್ಲ. ಆದುದರಿಂದ ನೋಡಲ್ ಅಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದರು.

**4) ಕಸದ ಸಮಸ್ಯೆ ಬಗ್ಗೆ:**

ವಾರ್ಡ್ ಮಾರ್ಷಲ್‌ರವರ ದೂರಿನನ್ವಯ ಜಿಪಿಎಸ್ ಅಳವಡಿಸದೆ ಕೆಲವು ಕಸದ ಆಟೋ ಟಿಪ್ಪರ್‌ಗಳು ಕಾರ್ಯನಿರ್ವಹಿಸುತ್ತಿರುವುದು ತಿಳಿದುಬಂದಿದ್ದು, ಇಂತಹ ಆಟೋಗಳಿಗೆ ಯಾವುದೇ ಬಿಲ್ ಪಾವತಿ ಮಾಡದಂತೆ ಸಭೆಯಲ್ಲಿ ನೋಡಲ್ ಅಧಿಕಾರಿಗಳು ತೀರ್ಮಾನಿಸಿದರು.

ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ವಾರ್ಡ್ ಪೌರ ಕಾರ್ಮಿಕರ ವೇತನ ಪಾವತಿಯಲ್ಲಿ ವಿಳಂಬವಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದ್ದು, ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ ಪೌರ ಕಾರ್ಮಿಕರಿಗೆ ಸಮರ್ಪಕವಾಗಿ ವೇತನ ಪಾವತಿ ಮಾಡುವಂತೆ ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಸೂಚಿಸಲಾಯಿತು.

ಪಿಆರ್ ಸ್ಕೂಲ್ ಹಾಗೂ ಹೊಸದಾಗಿ ನಿರ್ಮಿಸುತ್ತಿರುವ ಇಡಬ್ಲ್ಯೂಎಸ್ ವಸತಿ ಸಮುಚ್ಚಯದ ಸುತ್ತಮುತ್ತ ಇರುವ ಬ್ಲ್ಯಾಕ್‌ಸ್ಪಾಟ್‌ಗಳ ಬಗ್ಗೆ ಮಾರ್ಷಲ್ ದೂರಿದ್ದು, ಇದರ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಬ್ಲ್ಯಾಕ್‌ಸ್ಪಾಟ್‌ಗಳನ್ನು ಈ ಕೂಡಲೇ ತುರ್ತಾಗಿ ತೆರವುಗೊಳಿಸಲು ಸೂಚಿಸಲಾಯಿತು.

**5) ಕಂದಾಯ ಇಲಾಖೆ:**

ವಾರ್ಡ್ ವ್ಯಾಪ್ತಿಯಲ್ಲಿ ಕಂದಾಯ ಪಾವತಿಸದೇ ಇರುವವರಿಗೆ ಕಂದಾಯ ಇಲಾಖೆಯಿಂದ 1800 ನೋಟೀಸ್ ಜಾರಿಗೊಳಿಸಲಾಗಿದೆ. ಹಾಗೂ 80 ವಾರೆಂಟ್ ಮಾಡಲಾಗಿದೆ. ಇದಕ್ಕೆ ಸಂಬಂಧಪಟ್ಟ ದಾಖಲೆಗಳನ್ನು ಮುಂದಿನ ಸಭೆಯಲ್ಲಿ ಒದಗಿಸಲು ಸಂಬಂಧಪಟ್ಟ ಕಂದಾಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Yashavanth. C.V
**(ಯಶವಂತ್ ಸಿ. ವಿ.)**
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

**(ಎನ್. ಜಿ. ಉಮೇಶ್)**
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37